**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1696/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಭರಮಪ್ಪ ಬಿಳಗಲಿ | ಪ್ರಾಸಾ-6 |
| ತಂದೆಯ ಹೆಸರು | : ಮನೋಹರ | ಚಾಸಾ-11 |
| ವಯಸ್ಸು | : 31 ರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ. | ದಿನಾಂಕಃ 27.06.2026. |
| ವಾಸಸ್ಥಳ | : ಬಟ್ಟಕ ಗ್ರಾಮಾಂತರ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ದಿ.02.02.2024 ರಿಂದ 20.06.2024 ಇಲ್ಲಿಯವರೆಗೂ ಕುದುರೆಮುಖ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.04.04.2024 ರಂದು ಪೊಲೀಸ್ ಉಪಾದೀಕ್ಷಕರು, ಕೊಪ್ಪ ರವರು ನೀಡಿದ ಜ್ಞಾಪನ ಪತ್ರವನ್ನು ಸ್ವೀಕರಿಸಿಕೊಂಡು, ಮೊಕದ್ದಮೆ ಸಂಖ್ಯೆಃ-5/2024 ರ ಕಡತವನ್ನು ಪಡೆದುಕೊಂಡು, ತನಿಖೆಯನ್ನು ಮುಂದುವರೆಸುವಂತೆ ಹೇಳಿದ ಕಾರಣ, ದಿ.10.06.2024 ರಂದು ತಾಲ್ಲೂಕು ದಂಡಾಧಿಕಾರಿಯವರಿಗೆ ನೋಟೀಸನ್ನು ಜಾರಿ ಮಾಡಿ ತನಿಖಿಗೆ ಸಹಕರಿಸುವಂತೆ ಮನವಿ ಮಾಡಿಕೊಂಡಿರುತ್ತೇನೆ. ನಾನು ವರ್ಗಾವಣೆಯಾದ ಕಾರಣ ಮುಂದಿನ ತನಿಖೇಯ ಸಂಬಂಧ ಪ್ರಕರಣದ ಕಡತವನ್ನು ಚಾಸಾ-12 ರವರಿಗೆ ನೀಡಿರುತ್ತೇನೆ.

ಸಾಕ್ಷಿಯು ದಿ.10.06.2024 ರಂದು ಚಾಸಾ-6 ರವರಿಗೆ ನೀಡಿದ ಮನವಿ ಪತ್ರವನ್ನು ನಿಪಿ-10 ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ.ಎನ್.ವಿ. ವಕೀಲರಿಂದಃ ಶ್ರೀ ಜಿ.ಬಿ.ವಿ. ವಕೀಲರ ಪರವಾಗಿಃ**

ನಾನು ನನ್ನ ಮೇಲಾಧಿಕಾರಿಯವರ ಆದೇಶದ ಮೇರೆಗೆ ಪ್ರಸ್ತುತ ಪ್ರಕರಣದ ಭಾಗಶಃ ತನಿಖೆಯನ್ನು ಮಾಡಿರುವುದು ಸುಳ್ಳು ಎಂದರೆ ಸರಿಯಲ್ಲ. ತಾಲ್ಲೂಕು ದಂಡಾಧಿಕಾರಿಯವರಿಗೆ ನೋಟೀಸನ್ನು ನೀಡಿರುವುದಿಲ್ಲ ಸುಳ್ಳು ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1696/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಬಾಬು ಸೋಮು ಅಗೇರ್ | ಪ್ರಾಸಾ-7 |
| ತಂದೆಯ ಹೆಸರು | : ಸೋಮು | ಚಾಸಾ-12 |
| ವಯಸ್ಸು | : 53 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ. | ದಿನಾಂಕಃ 27.06.2026. |
| ವಾಸಸ್ಥಳ | : ಕಾರವಾರ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು 2023 ರಿಂದ 2025 ರವರೆಗೂ ಕಳಸ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.15.07.2024 ರಂದು ಪೊಲೀಸ್ ಉಪಾದೀಕ್ಷಕರು, ಕೊಪ್ಪ ರವರು ನೀಡಿದ ಜ್ಞಾಪನ ಪತ್ರವನ್ನು ಸ್ವೀಕರಿಸಿಕೊಂಡು, ಈ ಪ್ರಕರಣದಲ್ಲಿ ತನಿಖೆಯನ್ನು ಮುಂದುವರೆಸಿರುತ್ತೇನೆ. ದಿ.16.07.2024 ರಂದು ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿ.20.07.2024 ರಂದು ಚಾಸಾ-6 ಮತ್ತು 8 ರವರು ನೀಡಿದ ಕೃತ್ಯ ನಡೆದ ಸ್ಥಳದ ದಾಖಲಾತಿಗಳನ್ನು ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ದಿ.20.07.2024 ರಂದು ಚಾಸಾ-8 ರವರು ನೀಡಿದ ವರದಿಯನ್ನು ದಾಖಲಾತಿಯೊಂದಿಗೆ ನಿಪಿ-11, ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ದಿ.20.07.2024 ರಂದು ಚಾಸಾ-6 ರವರು ನೀಡಿದ ವರದಿಯನ್ನು ನಿಪಿ-12, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ದಿ.20.07.2024 ರಂದು ಚಾಸಾ-9 ರವರು ನೀಡಿದ ವರದಿಯನ್ನು ನಿಪಿ-13, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು. ದಿ.16.07.2024 ರಂದು ದಾಖಲಿಸಿಕೊಂಡ ಆರೋಪಿಯ ಮರು ಹೇಳಿಕೆಯನ್ನು ನಿಪಿ-14, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ.ಎನ್.ವಿ. ವಕೀಲರಿಂದಃ ಶ್ರೀ ಜಿ.ಬಿ.ವಿ. ವಕೀಲರ ಪರವಾಗಿಃ**

ನಾನು ನನ್ನ ಮೇಲಾಧಿಕಾರಿಯವರಿಂದ ಜ್ಞಾಪಾನ ಪತ್ರವನ್ನು ಸ್ವೀಕರಿಸಿ ಪ್ರಸ್ತುತ ಪ್ರಕರಣದ ಭಾಗಾಶಃ ತನಿಖೆಯನ್ನು ಕೈಗೊಂಡಿರುವುದು ಸುಳ್ಳು ಎಂದರೆ ಸರಿಯಲ್ಲ. ಅದೇ ರೀತಿ ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ದಾಖಲಿಸಿಕೊಂಡಿರುವುದು ಸುಳ್ಳು ಎಂದರೆ ಸರಿಯಲ್ಲ. ಆರೋಪಿಯಿಂದ ಖಾಲಿ ಹಾಳೆಯಲ್ಲಿ ಸಹಿಯನ್ನು ಪಡೆದು ಅವರ ಹೇಳಿಕೆಯಂತೆ ನಾನೇ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ-6 ರವರಿಂದ ಪ್ರಕರಣಕ್ಕೆ ಸಹಾಯವಾಗುವಂತೆ ದಾಖಲಾತಿಗಳನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಆರೋಪವು ಸಾಬೀತಾಗದೆ ಇದ್ದರು ಸುಳ್ಳು ದೋ.ಪ.ಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದರೆ

ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.